ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಮಂಡ್ಯ D. C. C. ಬ್ಯಾಂಕಿನಲ್ಲಿ ಅವ್ಯವಹಾರದ ತನಿಖೆ ಬಗ್ಗೆ

ಶ್ರೀ ಕೆ. ಟಿ. ಶ್ರೀಕಂಠೇಗೌಡ(ಪದವೀಧರರ ಕ್ಷೇತ್ರ) –

714 (781) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಂಡ್ಯ D. C. C. ಬ್ಯಾಂಕಿನಲ್ಲಿ ಕೋರ್ ಬ್ಯಾಂಕಿಂಗ್ ಸಲ್ಯೂಷನ್ ಅಳವಡಿಸಲು ಕಾನೂನು ಬಾಹಿರವಾಗಿ ಗುತ್ತಿಗೆ ನೀಡಿರುವುದು ಮತ್ತು ಇನ್ನಿತರ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ತನಿಖಾ ತಂಡವು ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ; (ವಿವರ ನೀಡುವುದು)

(ಇ) ಸಲ್ಲಿಸಿದ್ದಲ್ಲಿ, ರುಜುವಾತಾದ ಆರೋಪಗಳ ಸಂಖ್ಯೆ ಎಷ್ಟು;

(ಈ) ತಪ್ಪಿತಸ್ಥರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)